# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-03/2022-23 ದಿನಾಂಕ: 13/05/2022

-:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 07/05/2022 ಶನಿವಾರದಂದು ಬೆಳಿಗ್ಗೆ 10.30 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಬೆನಕೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ಬೆನಕೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಯಲ್ಲಿ ಹಾಜರಿದ್ದವರು:-**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಬೆನಕೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀಮತಿ ಡಾ. ಮಮತಾ ಕಿರಣ್, ವೈದ್ಯಕೀಯ ಅಧಿಕಾರಿ, ಆರೋಗ್ಯ ಇಲಾಖೆ, ವಾರ್ಡ್-75, ಬಿಬಿಎಂಪಿ |
| 4 | ಶ್ರೀ ಸಿದ್ಧರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 5 | ಶ್ರೀ ಎಸ್. ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 6 | ಶ್ರೀ ಶಿವಕುಮಾರ್, ಸಹಾಯಕ ಅಭಿಯಂತರರು, ಎನ್.ಡಬ್ಲ್ಯು-2, ಬಿ.ಡಬ್ಲ್ಯು.ಎಸ್.ಎಸ್.ಬಿ. |
| 7 | ಶ್ರೀಮತಿ ಲತಾ ಟಿ.ಎಸ್. ಕಿರಿಯ ಅಭಿಯಂತರರು, ಎನ್-3 ಉಪವಿಭಾಗ, ಬೆಸ್ಕಾಂ |
| 8 | ಶ್ರೀ ನಿರಂಜನ್ ಎನ್. ಸಿ. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ |
| 9 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ಕಾಮಗಾರಿ ವಿಭಾಗ, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಬರಡೀ ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯು-1, ಬಿ.ಡಬ್ಲ್ಯು.ಎಸ್.ಎಸ್.ಬಿ. |
| 11 | ಶ್ರೀ ಎನ್. ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ವಿಭಾಗ, ಪಶ್ಚಿಮ, ಬಿಬಿಎಂಪಿ. |
| 12 | ಶ್ರೀ ಮಾರುತಿ, ಮೇಸ್ತ್ರಿ, ಅರಣ್ಯ ಇಲಾಖೆ, ಪಶ್ಚಿಮ ವಲಯ, ಬಿಬಿಎಂಪಿ. |
| 13 | ಶ್ರೀ ಕೆಂಪಯ್ಯ, ಮೇಸ್ತ್ರಿ, ಘ.ತ್ಯಾ.ನಿ. ವಿಭಾಗ, ವಾರ್ಡ್-75, ಬಿಬಿಎಂಪಿ. |
| 14 | ಶ್ರೀ ದಿಲೀಪ್ ಕುಮಾರ್, ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 15 | ಶ್ರೀ ಪುಟ್ಟಸ್ವಾಮಿ, ಉದ್ಯಾನವನಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75, ಬಿಬಿಎಂಪಿ. |
| 16 | ಶ್ರೀ ಸಿದ್ಧರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 17 | ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 18 | ಶ್ರೀ ಶಿ. ವ. ಲಕ್ಷ್ಮಣ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 19 | ಶ್ರೀ ವಿಜಯ್ ಕುಮಾರ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 20 | ಶ್ರೀ ಭಾಸ್ಕರ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 21 | ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು, ವಾರ್ಡ್-75. |

ಮು.ತಿ.ನೋ.

Scanned by CamScanner

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-

### 1. ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳು ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀಮತಿ ಡಾ. ಮಮತಾ ಕಿರಣ್, ವೈದ್ಯಕೀಯ ಅಧಿಕಾರಿ, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಯಾವುದೇ ಕೋವಿಡ್-19 ಸೋಂಕಿತರು ಕಂಡುಬಂದಿರುವುದಿಲ್ಲ ಎಂದು ತಿಳಿಸುತ್ತಾ, ಆಸ್ಪತ್ರೆಯ ಹೊರಾಂಗಣದಲ್ಲಿ ಒಂದು ಶೌಚಾಲಯವನ್ನು ನಿರ್ಮಿಸಿಕೊಡುವಂತೆ ಮತ್ತು ಲ್ಯಾಬ್ ರೂಮ್ ಹಾಗೂ ಮೆಡಿಸಿನ್ ಸ್ಟೋರ್ ರೂಮ್‌ಗಳನ್ನು ಮಾಡುವುದು ಅತ್ಯಾವಶ್ಯಕವಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಶೌಚಾಲಯ ಹಾಗೂ ಆಸ್ಪತ್ರೆಯಲ್ಲಿ ಅತ್ಯಾವಶ್ಯಕವಾದ ಲ್ಯಾಬ್ ರೂಮ್ ಮತ್ತು ಮೆಡಿಸಿನ್ ಸ್ಟೋರ್ ರೂಮ್‌ಗಳನ್ನು ನಿರ್ಮಿಸಲು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

### 2. ಅಭಿಯಂತರರ ವಿಭಾಗದ ಬಗ್ಗೆ:-

- ಶ್ರೀ ಮಂಜುನಾಥ್ ಆರ್., ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಇಂದಿರಾ ಕ್ಯಾಂಟೀನ್ ಆವರಣದಲ್ಲಿ ಅಂಗನವಾಡಿ ಕೇಂದ್ರವನ್ನು ಸ್ಥಾಪಿಸಲು ಕಟ್ಟಡವನ್ನು ನಿರ್ಮಿಸಲು ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಸೂಕ್ತ ಕ್ರಮವಹಿಸುವಂತೆ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಜೆ.ಸಿ.ನಗರದ 17ನೇ ಮುಖ್ಯರಸ್ತೆ 7ನೇ ಅಡ್ಡರಸ್ತೆಯಲ್ಲಿ ಹಾಗೂ ಪೈಪ್‌ಲೈನ್ ರಸ್ತೆಯಲ್ಲಿ ಚರಂಡಿಗಳ ಚಪ್ಪಡಿ ಕಲ್ಲುಗಳು ಒಡೆದು ಹೋಗಿದ್ದು, ಸರಿಪಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಶೀಘ್ರವಾಗಿ ಸರಿಪಡಿಸುವಂತೆ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಮಂಜುನಾಥ್ ಆರ್., ವಾರ್ಡ್‌ನ ನಾಗರೀಕರು ಮಾತನಾಡುತ್ತಾ, 20ನೇ ಮುಖ್ಯರಸ್ತೆಯಲ್ಲಿ ಬೃಹತ್ ಮಳೆ ನೀರುಗಾಲುವೆ ವಿಭಾಗದ ವತಿಯಿಂದ ರಾಜಕಾಲುವೆಯಲ್ಲಿ ಹೂಳು ತೆಗೆಯಲು ತಡೆಗೋಡೆಯನ್ನು ಒಡೆದುಹಾಕಿರುತ್ತಾರೆ ಇನ್ನೂ ಗೋಡೆಯನ್ನು ಸರಿಪಡಿಸಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
- ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಸಹಾಯಕ ಅಭಿಯಂತರರು, ಬೃ. ನೀ. ಗಾ. ರವರಿಗೆ ತಿಳಿಸಲಾಗಿದ್ದು, ಈ ಬಗ್ಗೆ ಕ್ರಮ ತೆಗೆದುಕೊಳ್ಳುವಂತೆ ಹಿಂದಿನ ಸಭೆಯಲ್ಲಿ ಸೂಚಿಸಲಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ಮಂಜುನಾಥ್ ಆರ್., ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಸಿದ್ಧಾರೂಢ ಉದ್ಯಾನವನದಲ್ಲಿ ಫೆನ್ಸಿಂಗ್ ಸರಿಪಡಿಸುವುದು ಹಾಗೂ ಇಂದಿರಾ ಕ್ಯಾಂಟೀನ್ ಗೇಟನ್ನು ಸರಿಪಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಸಹಾಯಕ ಅಭಿಯಂತರರು ಮಾತನಾಡುತ್ತಾ, ಮುಂದಿನ ದಿನಗಳಲ್ಲಿ ಪಾಲಿಕೆಯ ಅನುದಾನದ ಅಡಿಯಲ್ಲಿ ಸೇರಿಸಿಕೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

### 3. ವಿದ್ಯುತ್ ವಿಭಾಗದ ಬಗ್ಗೆ:-

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ವಾರ್ಡ್‌ನ ಕೆಲವು ಕಡೆ ಹೈ ಮಾಸ್ಟ್ ಲೈಟ್‌ಗಳು ಸರಿಯಾಗಿ ಉರಿಯುತ್ತಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಪರಿಶೀಲಿಸಿ ಶೀಘ್ರವಾಗಿ ಸರಿಪಡಿಸಲು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.

### 4. ಪಶುಪಾಲನೆ ವಿಭಾಗದ ಬಗ್ಗೆ:-

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತವೆ, ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಕ್ರಮವಹಿಸುವಂತೆ ಹಿರಿಯ ಪಶುವೈದ್ಯಕೀಯ ಪರಿವೀಕ್ಷಕರು ರವರಿಗೆ ತಿಳಿಸುವಂತೆ

ಮು.ತಿ.ನೋ.

Scanned by CamScanner

ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

5. <u>ಕಂದಾಯ ವಿಭಾಗದ ಬಗ್ಗೆ:-</u>

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.
- ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 2022-23ನೇ ಸಾಲಿನಲ್ಲಿ 01-ಏಪ್ರಿಲ್-2022 ರಿಂದ ಇಲ್ಲಿಯವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 2.77 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

6. <u>ಅರಣ್ಯ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಕೆಂಪೇಗೌಡ ಉದ್ಯಾನವನದ ಎದುರುಗಡೆ ದೊಡ್ಡಮ್ಮ ದೇವಸ್ಥಾನದ ಬಳಿಯಲ್ಲಿ ಒಂದು ಮರವು ವಿದ್ಯುತ್ ಕಂಬಕ್ಕೆ ತಾಗುತ್ತಿರುತ್ತದೆ. ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸದರಿ ದೂರಿನಂತೆ ಮರವನ್ನು ಪರಿಶೀಲಿಸಿ ತೆರವುಗೊಳಿಸಲು ಸೂಕ್ತ ಕ್ರಮವಹಿಸುವಂತೆ ಶ್ರೀ ಮಾರುತಿ, ಮೇಸ್ತ್ರಿ, ಅರಣ್ಯ ಇಲಾಖೆ, ಬಿಬಿಎಂಪಿ ರವರಿಗೆ ಸಭೆಯಲ್ಲಿ ತಿಳಿಸಿದರು.

7. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳು ಸರಿಯಾಗಿ ಬರುತ್ತಿಲ್ಲ, ಕಸ ಸರಿಯಾಗಿ ವಿಲೇವಾರಿ ಆಗುತ್ತಿಲ್ಲ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳನ್ನು ಸರಿಯಾಗಿ ನಿರ್ವಹಣೆ ಮಾಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ನಿರಂಜನ್, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

8. <u>ತೋಟಗಾರಿಕೆ ವಿಭಾಗದ ಬಗ್ಗೆ:-</u>

- ಶ್ರೀ ಸುಬ್ಬಣ್ಣ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕೆಂಪೇಗೌಡ ಉದ್ಯಾನವನದಲ್ಲಿ ಕಸವನ್ನು ತೆರವುಗೊಳಿಸಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

9. <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಶ್ರೀ ಭಾಸ್ಕರ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕಿರ್ಲೋಸ್ಕರ್ ಕಾಲೋನಿಯ 6ನೇ ಅಡ್ಡರಸ್ತೆಯಲ್ಲಿರುವ ಒಳಾಂಗಣ ಬ್ಯಾಡ್ಮಿಂಟನ್ ಕ್ರೀಡಾಂಗಣ ಕಟ್ಟಡದ ಬಳಿಯಲ್ಲಿ ಎರಡು ಮರಗಳು ಹೈ ಟೆನ್ಷನ್ ತಂತಿಗಳಿಗೆ ತುಂಬಾ ಹತ್ತಿರವಾಗಿ ಬೆಳೆಯುತ್ತಿದ್ದು ಇದನ್ನು ಶೀಘ್ರವಾಗಿ ತೆರವುಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ತುಂಬಾ ತೊಂದರೆ ಉಂಟಾಗುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಈ ಕೂಡಲೆ ಅರಣ್ಯ ಇಲಾಖೆ ಸಿಬ್ಬಂದಿ ರವರೊಂದಿಗೆ ಸದರಿ ಸ್ಥಳವನ್ನು ಪರಿಶೀಲಿಸಿ ವರದಿ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ಲತಾ, ಕಿರಿಯ ಅಭಿಯಂತರರು, ಬೆಸ್ಕಾಂ ರವರು ಹಾಗೂ ಶ್ರೀಮಾರುತಿ, ಮೇಸ್ತ್ರಿ, ಅರಣ್ಯ ಇಲಾಖೆ ರವರಿಗೆ ಸಭೆಯಲ್ಲಿ ಸೂಚಿಸಿದರು.
- ಶ್ರೀಮತಿ ಲತಾ, ಕಿರಿಯ ಅಭಿಯಂತರರು, ಬೆಸ್ಕಾಂ ರವರು ಸ್ಥಳ ಪರಿಶೀಲನೆಯ ನಂತರ ಮಾತನಾಡುತ್ತಾ, ಸದರಿ ಮರವು ಹೈ ಟೆನ್ಷನ್ ತಂತಿಗಳಿಗೆ ತುಂಬಾ ಹತ್ತಿರವಾಗಿದ್ದು, ಇವುಗಳನ್ನು ತೆರವುಗೊಳಿಸುವುದು ನಮ್ಮ ಇಲಾಖೆಯಿಂದಾಗಲಿ ಅಥವಾ ಬಿಬಿಎಂಪಿ ಅರಣ್ಯ ಇಲಾಖೆಯ ವತಿಯಿಂದಾಗಲೀ ತುಂಬಾ ಕಷ್ಟಕರವಾಗಿರುತ್ತದೆ. ಆದುದರಿಂದ ವ್ಯವಸ್ಥಾಪಕ ನಿರ್ದೇಶಕರು, ಕೆ.ಪಿ.ಟಿ.ಸಿ.ಎಲ್. ರವರಿಗೆ ಪತ್ರವನ್ನು ಬರೆದು ತೊಂದರೆಯ ಬಗ್ಗೆ ತಿಳಿಸಿದ್ದಲ್ಲಿ ಕೆ.ಪಿ.ಟಿ.ಸಿ.ಎಲ್. ವತಿಯಿಂದಲೇ ಮರವನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಶೀಘ್ರವಾಗಿ ಸದರಿ ಮರಗಳನ್ನು ತೆರವುಗೊಳಿಸಿಕೊಡುವಂತೆ ಕೋರಿ ಶೀಘ್ರವಾಗಿ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಪಿ.ಟಿ.ಸಿ.ಎಲ್. ರವರಿಗೆ ಸಮಿತಿಯ ವತಿಯಿಂದ ಪತ್ರವನ್ನು ಬರೆದು ಸಲ್ಲಿಸುವಂತೆ ಸಭೆಯಲ್ಲಿ ತಿಳಿಸಿದರು.

10. <u>ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ಕಛೇರಿ ಮುಂಭಾಗದಲ್ಲಿ ಮತ್ತು 5ನೇ ಅಡ್ಡರಸ್ತೆ ಬಳಿಯಲ್ಲಿ ಒಳಚರಂಡಿ ಮ್ಯಾನ್‌ಹೋಲ್ ಪಕ್ಕದಲ್ಲಿ ಮಣ್ಣು ಕುಸಿದು ದೊಡ್ಡದಾಗಿ ಗುಂಡಿ ಮಾರ್ಪಾಡಾಗಿರುತ್ತದೆ ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಸದರಿ ಸ್ಥಳಗಳನ್ನು ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮವಹಿಸಬೇಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

13/5/2022

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

<u>ಪ್ರತಿಯನ್ನು :-</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner